# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 14.07.2011**

ದಿನಾಂಕ: 31.05.2011 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ/ನೌಕರರುಗಳ ಹಲವಾರು ಸ್ವಯಂ ಘೋಷಿತ ಸಂಘಗಳಿದ್ದು, ಈ ಸಂಘಗಳ ಪೈಕಿ ಎರಡು ಸಂಘಗಳ ಸ್ವಯಂ ಘೋಷಿತ ಪದಾಧಿಕಾರಿಗಳು ಪರಸ್ಪರ ಕಿತ್ತಾಟದಲ್ಲಿ ತೊಡಗಿದ್ದು, ಒಬ್ಬರ ವಿರುದ್ಧ ಮತ್ತೊಬ್ಬರು ಪೋಲೀಸ್ ಠಾಣೆಯಲ್ಲಿ ದೂರುಗಳನ್ನು ಸಲ್ಲಿಸಿರುತ್ತಾರೆ. ಇದು ನಗರ ಪಾಲಿಕೆಯ ಹಿತದೃಷ್ಠಿಯಿಂದ ಉತ್ತಮ ಬೆಳವಣಿಗೆಯಾಗಿರುವುದಿಲ್ಲ. ಈ ಸಂಘಗಳಿಗೆ ಇದುವರೆಗೆ ಚುನಾವಣೆಯು ಸಹ ನಡೆದಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ಮಾನ್ಯ ಆಯುಕ್ತರು, ಎಲ್ಲಾ ಪಕ್ಷದ ನಾಯಕರು ಹಾಗೂ ನಗರ ಪಾಲಿಕೆಯ ಅಪರ ಆಯುಕ್ತರು (ಆಡಳಿತ) ರವರನ್ನು ಒಳಗೊಂಡಂತೆ ಒಂದು ಸಮಿತಿಯನ್ನು ರಚಿಸಿ, ಅಧಿಕಾರಿ/ನೌಕರರಿಗೆ ಒಂದು ಸಂಘ ಮತ್ತು ಪೌರಕಾರ್ಮಿಕರು ಹಾಗೂ ಆರೋಗ್ಯ ಗ್ಯಾಂಗ್‌ಮೆನ್‌ರವರಿಗೆ ಒಂದು ಸಂಘ (ಎರಡು ಪ್ರತ್ಯೇಕ ಸಂಘಗಳು). ಈ ಸಂಘಗಳಿಗೆ ಮಾತ್ರ ಚುನಾವಣೆ ನಡೆಸಲು ಕ್ರಮ ಕೈಗೊಳ್ಳುವುದು. ಚುನಾಯಿತ ಸಂಘಗಳಿಗೆ ಮಾತ್ರ ಮಾನ್ಯತೆ ನೀಡಲು ಕೋರುತ್ತಾ, ಚುನಾವಣೆ ಪ್ರಕ್ರಿಯೆ ಮುಗಿಯುವವರೆಗೆ, ಸಂಘಗಳಿಗೆ ಹಾಲಿ ನೀಡಿರುವ ಎಲ್ಲಾ ರೀತಿಯ ಸವಲತ್ತುಗಳನ್ನು ಆಯುಕ್ತರು ಹಿಂಪಡೆದು ಮತ್ತು ಸ್ವಯಂ ಘೋಷಿತ ಸಂಘಗಳ ಪದಾಧಿಕಾರಿಗಳಿಗೆ ಯಾವುದೇ ಮಾನ್ಯತೆ ನೀಡದಂತೆ ಎಲ್ಲಾ ಅಧಿಕಾರಿಗಳಿಗೆ ಸುತ್ತೋಲೆಯನ್ನು ಹೊರಡಿಸುವಂತೆ ಆಯುಕ್ತರವರಿಗೆ ಸೂಚಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

ಆದ್ದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಸಂಘಗಳಿಗೆ ಮಾತ್ರ ಮಾನ್ಯತೆ ನೀಡಲು, ಚುನಾವಣೆ ಪ್ರಕ್ರಿಯೆ ಮುಗಿಯುವವರೆಗೆ ಸಂಘಗಳಿಗೆ ಹಾಲಿ ನೀಡಿರುವ ಸವಲತ್ತನ್ನು ಹಿಂಪಡೆದು ಹಾಗೂ ಸ್ವಯಂ ಘೋಷಿತ ಸಂಘದ ಪದಾಧಿಕಾರಿಗಳಿಗೆ ಯಾವುದೇ ಮಾನ್ಯತೆ ನೀಡದಂತೆ ಎಲ್ಲಾ ಅಧಿಕಾರಿಗಳಿಗೆ ಪಾಲಿಕೆ ಆಯುಕ್ತರು ಸುತ್ತೋಲೆ ಹೊರಡಿಸಿ ಆದೇಶಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**